ಇ) ಸಂವಿಧಾನದ 73ನೇ ತಿದ್ದುಪಡಿಯನ್ನು ತಾಲ್ಲೂಕು ಪಂಚಾಯತಿಯು ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಒಂದಾಗಿದ್ದು, ಸಂವಿಧಾನಕ್ಕೆ ತಿದ್ದುಪಡಿ ಮಾಡದೇ ಈ ಹಂತವನ್ನು ರದ್ದುಪಡಿಸಲು ಅವಕಾಶವಿಲ್ಲ.

ರಾಜ್ಯದಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ 8ನೇ ತರಗತಿ ಸೇರಿಸುವುದು

3578 (3494) ಶ್ರೀ ನೀಲಕಂಠಪ್ಪ ಬಿ.ಆರ್ (ತರೀಕೆರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ 8ನೇ ತರಗತಿಯನ್ನು ಸೇರಿಸಿ ಪ್ರಾರಂಭಿಸಲಾಗಿದೆಯೇ;

ಆ) ಈ ರೀತಿ ಪ್ರಾರಂಭಿಸಿದ ಶಾಲೆಗಳಿಗೆ ವಿಷಯವಾರು ಶಿಕ್ಷಕರ ನೇಮಕಾತಿ ಆಗಿದೆಯೇ ಆಗದಿದ್ದಲ್ಲಿ ಕೈಗೊಂಡಿರುವ ಕ್ರಮವೇನು?

ಇ) 8ನೇ ತರಗತಿಯನ್ನು ಪ್ರಾರಂಭಿಸಿದ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು.

ಈ) ಜಿಲ್ಲೆಯಿಂದ ಜಿಲ್ಲೆಗೆ ವರ್ಗವಾಗಿ ಬಂದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 10 ವರ್ಷ 15 ವರ್ಷ 20 ವರ್ಷದ ವಿಶೇಷ ಬಡ್ತಿಯನ್ನು ನೀಡಲು ಕೋರ್ಟ್ ಆದೇಶವಾಗಿದ್ದರೂ ಸರ್ಕಾರದ ಆದೇಶವಾಗದಿರಲು ಕಾರಣವೇನು?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ರಾಜ್ಯದಲ್ಲಿ 3 ಕಿ.ಮೀ ಅಂತರದಲ್ಲಿ ಪ್ರೌಢಶಾಲೆಗಳಿಲ್ಲದ ಕೇಂದ್ರ / ಆಯ್ದ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಯನ್ನು ಪ್ರಾರಂಭ ಮಾಡಲಾಗಿದೆ.

ಆ) ಪ್ರಾಥಮಿಕ ಶಾಲೆಯಲ್ಲಿರುವ ಪದವೀಧರ ಶಿಕ್ಷಕರು ಅಥವಾ ಹತ್ತಿರದ ಪ್ರೌಢಶಾಲೆಗಳ ಶಿಕ್ಷಕರನ್ನು ನಿಯೋಜಿಸಿಕೊಳ್ಳುವುದು ಮತ್ತು ಪಿಯುಸಿ, (ಪಿಸಿಎಂ) ವಿದ್ಯಾರ್ಹತೆ ಹೊಂದಿರುವ ವಿಜ್ಞಾನ ಶಿಕ್ಷಕರನ್ನು ಈ ಶಾಲೆಗಳಿಗೆ ನಿಯೋಜಿಸಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) 8ನೇ ತರಗತಿಯನ್ನು ಪ್ರಾರಂಭಿಸಿದ ಬಗ್ಗೆ ಜಿಲ್ಲಾವಾರು ಮಾಹಿತಿಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

ಈ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಸುಪ್ರೀಂ ಕೋರ್ಟ್ ಆದೇಶದಂತೆ ಪ್ರಥಮ ದರ್ಜೆ ಕಾಲೇಜುಗಳ ಗುತ್ತಿಗೆ ನೌಕರರನ್ನು ಖಾಯಂ ಗೊಳಿಸುವ ಬಗ್ಗೆ

3579 (3495) ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಪ್ರೀಂ ಕೋರ್ಟ್ ಆದೇಶದಂತೆ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗುತ್ತಿಗೆ ನೌಕರರನ್ನು ಖಾಯಂ ಆಗಿ ನೇಮಿಸಿದ ಸಂಖ್ಯೆ ಎಷ್ಟು; ಉಳಿದವರ ಬಗ್ಗೆ ಏನು ಕ್ರಮ ಕೈಗೊಳ್ಳಲಾಗುವುದು;

ಆ) ಈ ನೌಕರರನ್ನು ಖಾಯಂಗೊಳಿಸುವಾಗ ಅನುಸರಿಸಿದ ನಿಯಮಗಳೇನು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ನೌಕರರು ಯಾರೂ ಇರುವುದಿಲ್ಲ ಹಾಗೂ ಸುಪ್ರೀಂ ಕೋರ್ಟಿಗೆ ಹೋಗಿರುವುದಿಲ್ಲ.